ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಮಕ್ಕಳ ವಾರ್ಡ್ ಸಭೆಗಳನ್ನು ನಡೆಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

429 (564) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಗ್ರಾಮೀಣ ಪ್ರದೇಶದ ಮಕ್ಕಳ ಸಮಸ್ಯೆಗಳನ್ನು ಆಲಿಸಲು ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ನವೆಂಬರ್ ತಿಂಗಳಿನಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ನಡೆಸಲು 2006 ರಲ್ಲಿ ಸುತ್ತೋಲೆ ಹೊರಡಿಸಲಾಗಿದ್ದು, ಪಟ್ಟಣ ಪ್ರದೇಶದ ಮಕ್ಕಳ ಸಮಸ್ಯೆಗಳನ್ನು ಆಲಿಸುವ ಕುರಿತು ಸರ್ಕಾರದ ಕ್ರಮವೇನು;

(ಆ) ಮಕ್ಕಳ ಗ್ರಾಮ ಸಭೆಗಳು ಕೇವಲ ಗ್ರಾಮೀಣ ಭಾಗಕ್ಕೆ ಮಾತ್ರ ಸೀಮಿತವಾಗಿದ್ದು, ನಗರವನ್ನು ಮಕ್ಕಳ ಸ್ನೇಹಿ ಮಾಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ನಗರ ಪ್ರದೇಶಗಳ ಪ್ರತಿ ವಾರ್ಡ್‌ಗಳಲ್ಲಿ ಇರುವ ಮಕ್ಕಳ ಸಂಖ್ಯೆಗಳ ಅಂಕಿ ಅಂಶ ಸರ್ಕಾರದ ಬಳಿ ಇದೆಯೇ; ತಿಂಗಳಲ್ಲಿ ಒಂದು ದಿನದ ಮಟ್ಟಿಗೆ ಮಕ್ಕಳ ವಾರ್ಡ್ ಸಭೆಗಳನ್ನು ನಡೆಸುವ ಕುರಿತು ಸರ್ಕಾರದ ನಿಲುವೇನು?